ಈ) ಉದ್ಭವಿಸುವುದಿಲ್ಲ.

ದ.ಕ. ಜಿಲ್ಲೆಯಲ್ಲಿ ಅಂಗನವಾಡಿಗಳಿಗೆ ಸ್ವಂತ ಕಟ್ಟಡ

3016 - ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ) : ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಒಟ್ಟು ಅಂಗನವಾಡಿಗಳೆಷ್ಟು? (ತಾಲ್ಲೂಕುವಾರು ವಿವರ ನೀಡುವುದು).

ಆ) ಅವುಗಳಲ್ಲಿ ಸ್ವಂತ ಕಟ್ಟಡ ಹೊಂದಿದ ಅಂಗನವಾಡಿಗಳೆಷ್ಟು?

ಶ್ರೀಮತಿ ವಿಮಲಾಬಾಯಿ ಜಗದೇವರಾವ್ ದೇಶ್‌ಮುಖ್ (ಮಹಿಳಾ ಮತ್ತು ಮಕ್ಕಳ ಕಲ್ಯಾಣ ರಾಜ್ಯ ಸಚಿವರು) :

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಟ್ಟು 2727 ಅಂಗನವಾಡಿ ಕೇಂದ್ರಗಳು ಮಂಜೂರಾಗಿದ್ದು, ಈ ಪೈಕಿ ಜುಲೈ 97ರ ಅಂತ್ಯಕ್ಕೆ 2726 ಕೇಂದ್ರಗಳು ಕಾರ್ಯನಿರತಗೊಂಡಿವೆ. (ತಾಲ್ಲೂಕುವಾರು ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ).

ಆ) 1401 ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡಗಳಿವೆ.

ಅನುಬಂಧ

ವಿಧಾನ ಸಭಾ ಸದಸ್ಯರಾದ ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 4253ಕ್ಕೆ ಸಂಬಂಧಿಸಿದ ಅನುಬಂಧ

ಕ್ರಮ ಸಂಖ್ಯೆ	ಯೋಜನೆಯ ಹೆಸರು	ಮಂಜೂರಾದ ಒಟ್ಟು ಅಂಗನವಾಡಿ ಕೇಂದ್ರಗಳ ಸಂಖ್ಯೆ	ಕಾರ್ಯನಿರತ ಅಂಗನವಾಡಿ ಕೇಂದ್ರಗಳ ಸಂಖ್ಯೆ
1.	ಬಂಟ್ವಾಳ	537	536
2.	ಬೆಳ್ತಂಗಡಿ	193	193
3.	ಕುಂದಾಪುರ	343	343
4.	ಕಾರ್ಕಳ	278	278
5.	ಮಂಗಳೂರು ನಗರ	110	110
6.	ಮಂಗಳೂರು (ಗ್ರಾಮಾಂತರ)	292	292

1	2	3	4
7.	ಪುತ್ತೂರು	363	363
8.	ಸೂಳ್ಯ	116	116
9.	ಉಡುಪಿ	495	495
	ಒಟ್ಟು	**2727**	**2726**

ದ.ಕನ್ನಡ ಜಿಲ್ಲೆಯ ಗ್ರಾಮ ಪಂಚಾಯಿತಿಗೊಂದು ಸಹಕಾರ ಸಂಘ

3018 - ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ) : ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಒಟ್ಟು ಸಂಘಗಳ ಸಂಖ್ಯೆ ಎಷ್ಟು? ತಾಲ್ಲೂಕುವಾರು ವಿವರ ನೀಡುವುದು?

ಆ) ಇವುಗಳ ಪೈಕಿ ಮೀನುಗಾರಿಕಾ ಸಹಕಾರ ಸಂಘಗಳ ಸಂಖ್ಯೆ ಎಷ್ಟು? ತಾಲ್ಲೂಕುವಾರು ವಿವರ ನೀಡುವುದು?

ಇ) ಗ್ರಾಮ ಪಂಚಾಯಿತಿಗೆ ಒಂದು ಸಹಕಾರ ಸಂಘವನ್ನು ಮಾಡುವ ಯೋಜನೆ ಸರ್ಕಾರದ ಮುಂದೆ ಇದೆಯೇ?

ಶ್ರೀ ಎಸ್. ಎಸ್. ಪಾಟೀಲ್ (ಸಹಕಾರ ಸಚಿವರು) :

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಒಟ್ಟು ಸಹಕಾರ ಸಂಘಗಳ ಸಂಖ್ಯೆ - 705

ತಾಲ್ಲೂಕುವಾರು ವಿವರ

1.	ಮಂಗಳೂರು ತಾಲ್ಲೂಕು	301
2.	ಬಂಟ್ವಾಳ ತಾಲ್ಲೂಕು	125
3.	ಪುತ್ತೂರು ತಾಲ್ಲೂಕು	131
4.	ಸುಳ್ಯ ತಾಲ್ಲೂಕು	066
5.	ಬೆಳ್ತಂಗಡಿ ತಾಲ್ಲೂಕು	032
	ಒಟ್ಟು	**705**

ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಒಟ್ಟು ಸಹಕಾರ ಸಂಘಗಳ ಪೈಕಿ ಮೀನುಗಾರಿಕಾ ಸಹಕಾರ ಸಂಘಗಳು 13 ತಾಲ್ಲೂಕುವಾರು ವಿವರ ಈ ಕೆಳಕಂಡಂತಿದೆ

1.	ಮಂಗಳೂರು ತಾಲ್ಲೂಕು	13